**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 3201/2021**

| | | | |
|---|---|---|---|
| **ಹೆಸರು** | **:** | **ಹಾಜೀ ಪಟೇಲ್** | **ಚಾ.ಸಾ. 3** |
| **ತಂದೆಯ ಹೆಸರು** | **:** | **ಮಹೇಬೂಬ ಪಟೇಲ್** | **ಪ್ರಾ.ಸಾ. 2** |
| **ವಯಸ್ಸು** | **:** | **47 ವರ್ಷ** | **ದಿನಾಂಕಃ 04-07-2026** |
| **ಉದ್ಯೋಗ** | **:** | **ಚಾಲಕ** | |
| **ವಾಸಸ್ಥಳ** | **:** | **ಮರಪಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಈಗ ಸಾಕ್ಷಿದಾರರಿಗೆ ಒಂದು ದಾಖಲೆಯನ್ನು ತೋರಿಸಿ ಸದರಿ ದಾಖಲೆಯೂ ಸ್ಥಳ ಪಂಚನಾಮೆಯಾಗಿದ್ದು ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿದಾರರ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ದಾಖಲೆಯಲ್ಲೆ ಯಾವಾಗ ಸಹಿ ಮಾಡಿದ್ದೆ ಎಂದು ನನಗೆ ನೆನಪಿಲ್ಲ ಪೋಲಿಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಸದರಿ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ದೂರು ಮತ್ತು ಪಂಚನಾಮೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 07-07-2020 ರಂದು ಬೆಳಗ್ಗೆ 10 ಗಂಟೆಗೆ ಪೋಲಿಸರು ನನ್ನ ಮತ್ತು ಚಾಸಾ-2ರವರ ಸಮಕ್ಷಮ ಚಾಸಾ-1ರವರು ತೋರಿಸದ ಸ್ಥಳದಲ್ಲಿ ಸ್ಥಳ ಪಂಚನಾಮೆ ಜರುಗಿಸಿದರು ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಜರುಗಿಸಿದರು ಇಲ್ಲ ಅಂತ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ವಕೀಲರಿಂದಃ ಇಲ್ಲಾ.**

**ಮರುವಿಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**